ಅಂತ್ಯೋದಯ ಪಡಿತರ ಚೀಟಿಗಳಿಗೆ ಹೊಸ ಅರ್ಜಿಗಳು ಸ್ವೀಕರಿಸುತ್ತಿಲ್ಲ.

ಈ) ದಿನಾಂಕ: 10.03.2013 ರಿಂದ ಅರ್ಜಿಗಳನ್ನು ಸ್ವೀಕರಿಸಿದ್ದು, ರಾಜ್ಯದಲ್ಲಿ ಹೊಸ ಪಡಿತರ ಚೀಟಿಗಾಗಿ ಒಟ್ಟು 39,23,691 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಈ ಪೈಕಿ 18,87,871 ಪಡಿತರ ಚೀಟಿಗಳನ್ನು ಈಗಾಗಲೇ ವಿತರಿಸಲಾಗಿದ್ದು, 2,98,147 ಪಡಿತರ ಚೀಟಿಗಳು ವಿತರಣೆಗೆ ಸಿದ್ದಗೊಂಡಿವೆ 2,97,508 ಅರ್ಜಿಗಳನ್ನು ತಿರಸ್ಕರಿಸಿದ್ದು 14,40,165 ಅರ್ಜಿಗಳು ಪರಿಶೀಲನೆಯಲ್ಲಿವೆ. ಅರ್ಜಿದಾರರ ನೈಜತೆಯನ್ನು ಮೊದಲ ಹಂತದಲ್ಲಿ ದೃಢೀಕರಿಸುವ ಸಲುವಾಗಿ ಅರ್ಹ ಅರ್ಜಿದಾರರಿಂದ ಎಪಿಕ್/ಯುಐಡಿ ಸಂಖ್ಯೆ ಸಂಗ್ರಹಿಸುತ್ತಿದ್ದು ಬಾಕಿ ಇರುವ ಅರ್ಜಿಗಳ ಪೈಕಿ 5,05,340 ಅರ್ಜಿದಾರರು ಮಾತ್ರ ತಮ್ಮ ಕುಟುಂಬದ ಅರ್ಹ ಸದಸ್ಯರ ಎಪಿಕ್ ಸಲ್ಲಿಸಿದ್ದು ಈ ಅರ್ಜಿಗಳನ್ನು ಆದ್ಯತೆಯ ಮೇಲೆ ವಿಲೇಗೊಳಿಸಲಾಗುತ್ತಿದೆ. ಉಳಿದ ಅರ್ಜಿದಾರರು ತಮ್ಮ ಎಪಿಕ್ ಸಂಖ್ಯೆ ಮಾಹಿತಿ ನೀಡಿದಲ್ಲಿ ಅಂತಹ ಅರ್ಜಿಗಳನ್ನು ಸಹ ಆದ್ಯತೆಯ ಮೇಲೆ ವಿಲೇಗೊಳಿಸಲಾಗುವುದು.

ಸರ್ಕಾರಿ ಆಸ್ಪತ್ರೆಗಳಲ್ಲಿ ಹುದ್ದೆಗಳ ಭರ್ತಿ

57 (3178); ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಮಡಿಕೇರಿ)

ಅ) ಕೊಡಗು ಜಿಲ್ಲೆ ಸೋಮವಾರಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರ, ಶುಶ್ರೂಷಕಿಯರ 11 ಹುದ್ದೆಗಳ ಪೈಕಿ ಕೇವಲ 3 ಹುದ್ದೆಗಳು ಮಾತ್ರ ಭರ್ತಿಯಾಗಿದ್ದು, ಉಳಿದ ಹುದ್ದೆಗಳು ಖಾಲಿ ಇದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ವೈದ್ಯರ ಹುದ್ದೆ ಮತ್ತು ಶುಶ್ರೂಷಕಿಯರ ಹುದ್ದೆ ಭರ್ತಿ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಿ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಿಬ್ಬಂದಿ

58 (2451); ಶ್ರೀ ಚಿಕ್ಕಮಾದು ಎಸ್. (ಹೆಚ್.ಡಿ. ಕೋಟೆ)

ಅ) ಮೈಸೂರು ಜಿಲ್ಲೆ ಹೆಚ್.ಡಿ. ಕೋಟೆ ತಾಲ್ಲೂಕಿಗೆ ಸರ್ಕಾರದ ವತಿಯಿಂದ ಆರೋಗ್ಯ ಇಲಾಖೆಗೆ ಮಂಜೂರಾದ ವೈದ್ಯರು, ಶುಶ್ರೂಷಕಿಯರು ಹಾಗೂ ವೈದ್ಯೇತರ ಸಿಬ್ಬಂದಿ ಎಷ್ಟು ಹಾಗೂ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವಿವರ ನೀಡುವುದು;

ಆ) ಸಮರ್ಪಕ ಸಿಬ್ಬಂದಿಯ ಕೊರತೆಯಿಂದ ಉತ್ತಮ ಆರೋಗ್ಯ ಸೇವೆ ನೀಡಲು ಸಾಧ್ಯವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದಲ್ಲಿ, ಸರ್ಕಾರ ಏನು ಕ್ರಮ ಕೈಗೊಂಡಿದೆ ?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಮೈಸೂರು ಜಿಲ್ಲೆ ಹೆಚ್.ಡಿ. ಕೋಟೆ ತಾಲ್ಲೂಕಿಗೆ ಮಂಜೂರಾದ ವೈದ್ಯರು, ಶುಶ್ರೂಷಕಿಯರು ಹಾಗೂ ವೈದ್ಯೇತರ ಸಿಬ್ಬಂದಿಗಳ ವಿವರಗಳು ಹಾಗೂ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

ಆ) ಬಂದಿದೆ

ಇ) ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಿ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ.